**ಪಿ.ಸಿ.ನಂ.632/2022**
**ಪಿ.ಡಬ್ಲ್ಯು. 1**

**ಸಾಕ್ಷಿಗೆ ದಿನಾಂಕಃ28.04.2023 ರಂದು ಪ್ರಮಾಣ ವಚನ ಭೋದಿಸಲಾಯಿತು.**
**ಸತ್ಯ ಪ್ರತಿಜ್ಞೆಯ ಹೇಳಿಕೆ: ಫಿರ್ಯಾದಿ ಪರ ವಕೀಲರಿಂದ**

ಈ ಪ್ರಕರಣದಲ್ಲಿ ನಾನು ಫಿರ್ಯಾದಿಯಾಗಿರುತ್ತೇನೆ. ನನ್ನ ಮುಖ್ಯವಿಚಾರಣೆ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಹೇಳಿರುವ ಎಲ್ಲ ವಿಷಯಗಳು ಸತ್ಯವಾಗಿರುತ್ತವೆ ಮತ್ತು ನನಗೆ ತಿಳಿದಿರುತ್ತವೆ. ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಮಾಹಿತಿಯನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ದಿಃ05.08.2022 ರಂದು ಆರೋಪಿಯು ಹೆಚ್.ಡಿ.ಎಫ್.ಸಿ. ಬ್ಯಾಂಕನ ಚೆಕ್‌ನ್ನು ನೀಡಿದ್ದು, ಸದರಿ ಚೆಕ್ ಅನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಪಿ.1** ಎಂದು ಗುರುತಿಸಲಾಯಿತು. ಸದರಿ ನಿ.ಪಿ.1 ರಲ್ಲಿ ಇರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು **ನಿ.ಪಿ.1(ಎ)** ಎಂದು ಗುರುತಿಸಲಾಯಿತು. ಸದರಿ ನಿಪಿ-1 ಅಮಾನ್ಯಗೊಂಡ ಬಗ್ಗೆ ದಿಃ08.08.2022 ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಪಿ.2** ಎಂದು ಗುರುತಿಸಲಾಯಿತು. ಸದರಿ ನಿಪಿ-1 ಅಮಾನ್ಯಗೊಂಡ ಬಗ್ಗೆ ದಿಃ03.09.2022 ರಂದು ನೀಡಿರುವ ಕಚೇರಿಯ ಕಾನೂನು ತಿಳುವಳಿಕೆ ಪತ್ರವನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಪಿ.3** ಎಂದು ಗುರುತಿಸಲಾಯಿತು. ಅಂಚೆ ರಶೀದಿಯನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಪಿ.4** ಗುರುತಿಸಲಾಯಿತು. ಅಂಚೆ ಲಕೋಟೆಯನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಪಿ. 5** ಎಂದು ಗುರುತಿಸಲಾಯಿತು. ಅದರಲ್ಲಿರುವ ನೋಟಿಸ್‌ನ ಪ್ರತಿಯನ್ನು ಅದನ್ನು **ನಿ.ಪಿ.5(ಎ)** ಎಂದು ಗುರುತಿಸಲಾಯಿತು. ಆದ್ದರಿಂದ ಆರೋಪಿಯ ವಿರುದ್ದ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕೆಂದು ಕೇಳಿಕೊಳ್ಳುತ್ತೇನೆ.

**ಮರುವಿಚಾರಣೆಃ ಇಲ್ಲಾ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಇದೆ.**

**1 ನೇ ಹೆಚ್ಚುವರಿ ಜೆಎಂಎಫ್‌ಸಿ ನ್ಯಾಯಾಧೀಶರು,**
**ವಿಜಯಪುರ.**